# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2015-16ನೇ ಸಾಲಿನಲ್ಲಿ ರಾಜ್ಯದ ವಿವಿಧ ಸ್ಥಳಗಳಲ್ಲಿ ಆಯಾ ಕೃಷಿ ವಿಶ್ವವಿದ್ಯಾನಿಲಯಗಳ ಸಹಯೋಗದೊಂದಿಗೆ "ಮತ್ಸ್ಯಮೇಳ" ಗಳನ್ನು ಏರ್ಪಡಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:- ಪತ್ರ ಸಂಖ್ಯೆ: ಮೀನಿ-35 ವಿಸ್ತರಣೆ-2015, ದಿನಾಂಕ: 27-08-2015 ಮತ್ತು 09-09-2015.

******

## ಪ್ರಸ್ತಾವನೆ:

ರಾಜ್ಯ ಸರ್ಕಾರವು 2015-16ನೇ ಸಾಲಿನ ಆಯವ್ಯಯ ಭಾಷಣದಲ್ಲಿ "ಮೀನುಗಾರಿಕೆ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಲು ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಬೃಹತ್ ಮತ್ಸ್ಯಮೇಳಗಳನ್ನು ಏರ್ಪಡಿಸಲಾಗುವುದು" ಎಂದು ಘೋಷಿಸಿರುತ್ತದೆ.

ಮೇಲೆ ಓದಲಾದ ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ಇವರ ಪತ್ರಗಳಲ್ಲಿ, ದಿನಾಂಕ: 17-07-2015 ರಂದು ನಡೆದ ಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮತ್ಸ್ಯಮೇಳಗಳನ್ನು ಉತ್ತರ ಕರ್ನಾಟಕದ ಭಾಗಗಳಲ್ಲಿ ಕೃಷಿ ವಿಶ್ವವಿದ್ಯಾನಿಲಯಗಳು ಹಾಗೂ ಕರ್ನಾಟಕ ಪಶುವೈದ್ಯಕೀಯ ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ, ಬೀದರ್ ಇವುಗಳ ವತಿಯಿಂದ ಏರ್ಪಡಿಸುವಂತೆ ತೀರ್ಮಾನಿಸಲಾಗಿರುತ್ತದೆ. ಈಗಾಗಲೇ ಕೃಷಿಮೇಳ ಮತ್ತು ಮತ್ಸ್ಯಮೇಳಗಳ ದಿನಾಂಕಗಳು ನಿಗದಿಯಾಗಿದ್ದು, ಸದರಿ ದಿನಾಂಕಗಳಂದು ನಡೆಯುವ ಕೃಷಿಮೇಳ ಮತ್ತು ಮತ್ಸ್ಯಮೇಳಗಳ ಸಂಬಂಧಪಟ್ಟ ವಿಶ್ವವಿದ್ಯಾನಿಲಯಗಳಿಗೆ ರೂ.77.81 ಲಕ್ಷಗಳ ಅನುದಾನಕ್ಕೆ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ 96 ಮೀಇಯೋ 2015 (ಭಾಗ-1), ಬೆಂಗಳೂರು ದಿನಾಂಕ: 18-09-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪಶು ವೈದ್ಯಕೀಯ ಮತ್ತು ಮೀನುಗಾರಿಕೆ ವಿಶ್ವವಿದ್ಯಾನಿಲಯ, ಬೀದರ್ ಮತ್ತು ಆಯಾ ಭಾಗದ ಕೃಷಿ ವಿಶ್ವವಿದ್ಯಾಲಯಗಳ ಸಹಯೋಗದೊಂದಿಗೆ ಕೃಷಿಮೇಳ ಮತ್ತು ಮತ್ಸ್ಯಮೇಳಗಳನ್ನು ಕೆಳಕಂಡ ವಿಶ್ವವಿದ್ಯಾನಿಲಯಗಳ ಮುಂದೆ ನಮೂದಿಸಿರುವ ದಿನಾಂಕಗಳಂದು ಹಾಗೂ ನಿಗದಿಪಡಿಸಿರುವ

-2-

ಮೊತ್ತದಲ್ಲಿ ಆಯೋಜಿಸಲು ಒಟ್ಟು ರೂ.77.81 ಲಕ್ಷ (ಎಪ್ಪತ್ತೇಳು ಲಕ್ಷದ ಎಂಬತ್ತೊಂದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಿದೆ.

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ವಿಶ್ವವಿದ್ಯಾನಿಲಯಗಳ ವಿವರ | ಮತ್ಸ್ಯಮೇಳ ಆಯೋಜಿಸಲು ನಿಗದಿಪಡಿಸಿದ ದಿನಾಂಕ | ಬಿಡುಗಡೆ ಮಾಡಿದ ಅನುದಾನ |
|---|---|---|---|
| 1. | ಕೃಷಿ ವಿಶ್ವವಿದ್ಯಾಲಯ, ಧಾರವಾಡ | ಸೆಪ್ಟಂಬರ್ 26 ರಿಂದ 28, 2015 | 20.00 |
| 2. | ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ | ಅಕ್ಟೋಬರ್ 3 ರಿಂದ 6, 2015 | 13.75 |
| 3. | ಕೃಷಿ ವಿಶ್ವವಿದ್ಯಾಲಯ, ರಾಯಚೂರು | ಅಕ್ಟೋಬರ್ 2015ರ 3ನೇ ವಾರ | 14.23 |
| 4. | ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು | ನವೆಂಬರ್ 19 ರಿಂದ 23, 2015 | 15.60 |
| 5. | ಕರ್ನಾಟಕ ಪಶುವೈದ್ಯಕೀಯ ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ, ಬೀದರ್ | ನವೆಂಬರ್ 2015 | 14.23 |
| | | ಒಟ್ಟು | 77.81 |

ಸದರಿ ಮೊತ್ತವನ್ನು ಮೇಲೆ ಕೋಷ್ಟಕದಲ್ಲಿ ನಮೂದಿಸಲಾದ ಆಯಾ ವಿಶ್ವವಿದ್ಯಾನಿಲಯಗಳ ಕಂಪ್ಟ್ರೋಲರ್‌ರವರುಗಳು ಸಲ್ಲಿಸುವ ಪೇಯೀಸ್ ರಸೀದಿಗೆ ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ಇವರು ಮೇಲು ರುಜು ಮಾಡಿ-ರಾಜ್ಯ ಹುಜೂರ್ ಖಜಾನೆಯಿಂದ ಹಣ ಸೆಳೆದು ಸದರಿ ವಿಶ್ವವಿದ್ಯಾನಿಲಯಗಳಿಗೆ ಪಾವತಿಸಲು ಅನುಮತಿ ನೀಡಲಾಗಿದೆ.

ಸದರಿ ಮೊತ್ತವನ್ನು ಲೆಕ್ಕ ಶೀರ್ಷಿಕೆ "2405 ಮೀನುಗಾರಿಕೆ-00-109 ವಿಸ್ತರಣೆ ಮತ್ತು ತರಬೇತಿ-0-01-ಸಂಶೋಧನೆ, ವಿಸ್ತರಣೆ, ಪ್ರದರ್ಶನ ಮತ್ತು ತರಬೇತಿ-051-ಸಾಮಾನ್ಯ ವೆಚ್ಚಗಳು (ಯೋಜನೆ)ರಡಿ ಒದಗಿಸಿರುವ ರೂ.284.00 ಲಕ್ಷ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆದೇಶ ಸಂಖ್ಯೆ: ಎಫ್‌ಡಿ/02/ಟಿಎಫ್‌ಪಿ/2015, ದಿನಾಂಕ: 09-04-2015 ರನ್ವಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಎಸ್. ಸುದರ್ಶನ್ ಕುಮಾರ್) 18/9/2015
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
18/9 (ಪಶುಸಂಗೋಪನೆ)

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.

2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ನಿರ್ದೇಶಕರು (ಪಿಎಫ್‌ಡಿ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6) ಸಂಬಂಧಿತ ವಿಶ್ವವಿದ್ಯಾನಿಲಯಗಳ ಕುಲಸಚಿವರಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
7) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8) ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
9) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
10) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಮ್ /ಹೆಚ್ಚಿನ ಪ್ರತಿಗಳು.